ದೂರವಾಣಿ ಸಂಖ್ಯೆ: 080-22212343 ಅಂತರ್ಜಾಲ: https://kptcl.karnataka.gov.in.
ಫ್ಯಾಕ್ಸ್ ಸಂಖ್ಯೆ: 080-22278803 ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521**

ಕಂಪನಿ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009

**ಸಂಖ್ಯೆ:ಕವಿಪ್ರನಿನಿ/ಬಿ99/ಬಿ5ಬಿ/11333/2009-10** **ದಿನಾಂಕ: 06.03.2024**

**ಲಗತ್ತು: ನಮೂನೆಗಳು**

## ಸುತ್ತೋಲೆ

**ವಿಷಯ:** ಅಧಿಕಾರಿಗಳು ಮತ್ತು ನೌಕರರು ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಿವರಣಾ ಪಟ್ಟಿಯನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:** 1. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ84/24333/ 2021-22 ದಿನಾಂಕ:22.06.2021.
2. ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 12 ಸೇನಿಸಿ 2022 ದಿನಾಂಕ:13.01.2023

\- - -

ಕವಿಪ್ರನಿನಿ ನೌಕರರ ಸೇವಾ(ನಡತೆ) ನಿಯಮಗಳು 2021 ನಿಯಮಾವಳಿ 24 ರ ಅನ್ವಯ, ನಿಗಮದ ಸಿಬ್ಬಂದಿಯು ತಮ್ಮ ಚರ/ಸ್ಥಿರ ಆಸ್ತಿ ಹಾಗೂ ಹೊಣೆಗಳ ವಿವರಗಳನ್ನು ಪ್ರತೀ ವರ್ಷವೂ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳಿಗೆ ಸಲ್ಲಿಸಬೇಕಾಗಿರುತ್ತದೆ. ಸಿಬ್ಬಂದಿ ತಮ್ಮ ಆಸ್ತಿ ಮತ್ತು ಹೊಣೆಗಳ ವಿವರಗಳ ಪಟ್ಟಿಯನ್ನು ನಿಗದಿತ ದಿನಾಂಕದಂದು ಸಲ್ಲಿಸದಿದ್ದಲ್ಲಿ, ಕರ್ತವ್ಯ ಲೋಪವೆಂದು ಪರಿಗಣಿಸಲಾಗುವುದು.

ಈ ವಿಷಯದಲ್ಲಿ ಕೆಳಕಂಡ ನಿರ್ದೇಶನಗಳನ್ನು ನೀಡಲಾಗಿದೆ:

1. ಈ ಸುತ್ತೋಲೆಯೊಂದಿಗೆ ಲಗತ್ತಿಸಿದ ನಮೂನೆ-I ಮತ್ತು II ರಲ್ಲಿ ನಿಗಮದ ಸಿಬ್ಬಂದಿಯು ತಮ್ಮ ಚರ/ಸ್ಥಿರ ಆಸ್ತಿ ಹಾಗೂ ಹೊಣೆಗಾರಿಕೆ ಪಟ್ಟಿಯನ್ನು ದಿನಾಂಕ:01.04.2023 ರಿಂದ ದಿನಾಂಕ:31.03.2024 ರವರೆಗೆ ಅನ್ವಯವಾಗುವಂತೆ ಸಲ್ಲಿಸತಕ್ಕದ್ದು.

2. ರಾಜ್ಯಾವಾರು ಎ ಮತ್ತು ಬಿ ಪದವೃಂದದ ಅಧಿಕಾರಿಗಳು ವಿವರಗಳನ್ನು ಭರ್ತಿಮಾಡಿ ಹಾಗೂ ತಮ್ಮ ಪಿ.ಐ.ಎನ್ ಸಂಖ್ಯೆಯನ್ನು ತಪ್ಪದೇ ನಮೂದಿಸಿ ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ ರವರಿಗೆ ನೇರವಾಗಿ ಕಳುಹಿಸತಕ್ಕದ್ದು.

3. ಆರ್ಥಿಕ ವರ್ಷ 2023-24 ಕ್ಕೆ (ದಿನಾಂಕ:31.03.2024 ರಂದಿಗೆ) ಇರುವ ಚರ/ಸ್ಥಿರ ಆಸ್ತಿ ಹಾಗೂ ಹೊಣೆಗಳ ವಿವರವನ್ನು ಸಂಬಂಧಿಸಿದ ಕಛೇರಿಗಳಿಗೆ ಸಲ್ಲಿಸಲು ಕೊನೆಯ ದಿನಾಂಕ: 31.05.2024 ಹಾಗೂ ರಾಜ್ಯಾವಾರು ಎ ಮತ್ತು ಬಿ ಪದವೃಂದದ ಅಧಿಕಾರಿಗಳು ಜೂನ್ 2024 ರ ಮಾಹೆಯ ವೇತನದ ಹುಂಡಿಯಲ್ಲಿ ಸಲ್ಲಿಸಿರುವ ಬಗ್ಗೆ ದೃಢೀಕರಿಸತಕ್ಕದ್ದು.

4. ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಚರ/ಸ್ಥಿರ ಆಸ್ತಿ ಹಾಗೂ ಹೊಣೆಗಳ ವಿವರವನ್ನು 'ಸಿ' ಮತ್ತು 'ಡಿ' ಗುಂಪಿನ ನೌಕರರಿಂದ ಪಡೆದು ಅವರ ಕಛೇರಿಯಲ್ಲಿ ವೈಯಕ್ತಿಕ ಕಡತಗಳನ್ನು ನಿರ್ವಹಿಸತಕ್ಕದ್ದು.

ಈ ವಿಷಯಕ್ಕೆ ಸಂಬಂಧಿಸಿದಂತೆ, ಮೇಲಾಧಿಕಾರಿಗಳು ಅವರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಯ ಗಮನಕ್ಕೆ ಮೇಲಿನ ಸೂಚನೆಗಳನ್ನು ತಪ್ಪದೇ ತರಲು ಸೂಚಿಸಿದೆ.

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ.,)**
**ಕವಿಪ್ರನಿನಿ**

**ಪ್ರತಿಗಳು:**

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂ.
4. ಮುಖ್ಯ ಇಂಜಿನಿಯರ್(ವಿ)/ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
5. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಹಣಕಾಸು)/(ಪ್ರಸರಣ)/(ಆ. ಮತ್ತು ಮಾ.ಸಂ), ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in → eprasarana ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ.**

6. ಎಲ್ಲಾ ಅಧೀಕ್ಷಕ ಇಂಜಿನಿಯರ್/ ನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
8. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ), ಕವಿಪ್ರನಿನಿ/ಎಸ್ಕಾಂ.
9. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಗಳು ಮಾಹಿತಿಗಾಗಿ.**

1. ಶ್ರೀ.ಆರ್.ಹೆಚ್. ಲಕ್ಷ್ಮೀ ಪತಿ, ಅಧ್ಯಕ್ಷರು, ಕವಿಪ್ರನಿ.ನೌ.ಸಂಘ(ನೋ.ಸಂ.659)& ನಿರ್ದೇಶಕರು, ಕವಿಪ್ರನಿನಿ & ವಿಸಕಂಗಳು.
2. ಶ್ರೀ.ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಮತ್ತು ನಿರ್ದೇಶಕರು, ಕವಿಪ್ರನಿನಿ & ವಿಸಕಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಘ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಕೆ.ಆರ್.ವೃತ್ತ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ವಿಸಕಂಗಳು/, ಪ.ಜಾ/ಪ.ಪಂ. ಅಧಿಕಾರಿಗಳ, ಸಂಘ, ಬೆಂಗಳೂರು.

**ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ99/ಬಿ5ಬಿ/11333/2009-10 ದಿನಾಂಕ: 06.03.2024 ರ ಅನುಬಂಧ [ನಮೂನೆ-I]**

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ದಿನಾಂಕ:01.04.2023 ರಿಂದ ದಿನಾಂಕ:31.03.2024 ರವರೆಗಿನ ಸ್ಥಿರಾಸ್ತಿ ವಿವರಣಾ ಪಟ್ಟಿ

1. ಅಧಿಕಾರಿ/ನೌಕರನ ಹೆಸರು:
   ಪಿಐಎನ್ ಸಂಖ್ಯೆ (ಇದ್ದಲ್ಲಿ) :
2. ಪ್ರಸ್ತುತ ಧಾರಣ ಮಾಡಿರುವ ಹುದ್ದೆ:
3. ವೇತನ ಶ್ರೇಣಿ ಮತ್ತು ಈಗಿನ ವೇತನ:

| ಆಸ್ತಿ ಇರುವ ಜಿಲ್ಲೆ, ಉಪ ವಿಭಾಗ, ತಾಲ್ಲೂಕು, ಗ್ರಾಮದ ಹೆಸರು | ಭೂಮಿ, ಆಸ್ತಿ/ಮನೆ ಮತ್ತು ಇತರ ಕಟ್ಟಡದ ಹೆಸರು ಮತ್ತು ವಿವರಗಳು, ಪಾವತಿಸಿರುವ ಬೆಲೆ | ಈಗಿನ ಮೌಲ್ಯ ಮಾಪನ (ಅಂದಾಜು) | ನಿಗಮದ ನೌಕರನ ಹೆಸರಿನಲ್ಲಿಲ್ಲದಿದ್ದರೆ, ಯಾರ ಹೆಸರಿನಲ್ಲಿದೆ & ನೌಕರನೊಂದಿಗೆ ಅವರಿಗಿರುವ ಸಂಬಂಧ | ಹೇಗೆ ಅರ್ಜಿಸಲಾಯಿತು, ಖರೀದಿಯ ಮೂಲಕವೇ, ಗುತ್ತಿಗೆಯ ಮೂಲಕವೇ, ಅಡಮಾನದ ಮೂಲಕವೇ, ಪಿತ್ರಾರ್ಜಿತವೇ ಅಥವಾ ಬೇರೆ ರೀತಿಯಲ್ಲಿ ಅರ್ಜಿಸಿದ್ದೇ? ಅರ್ಜಿಸಿದ ದಿನಾಂಕ | ಆಸ್ತಿಯಿಂದ ಬಂದ ವಾರ್ಷಿಕ ಆದಾಯ | ಷರಾ |
|---|---|---|---|---|---|---|
| 1 | 2 | 3 | 4 | 5 | 6 | 7 |
| | | | | | | |

ಸಹಿ :

ಪದನಾಮ :

**ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ99/ಬಿ5ಬಿ/11333/2009-10 ದಿನಾಂಕ: 06.03.2024 ರ ಅನುಬಂಧ [ನಮೂನೆ-II]**

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ದಿನಾಂಕ:01.04.2023 ರಿಂದ ದಿನಾಂಕ:31.03.2024 ರವರೆಗಿನ ಚರಾಸ್ತಿ ವಿವರಣಾ ಪಟ್ಟಿ

1. ಹೆಸರು :
   ಪಿಐಎನ್ ಸಂಖ್ಯೆ (ಇದ್ದಲ್ಲಿ):
2. ಪ್ರಸ್ತುತ ಧಾರಣ ಮಾಡಿರುವ ಹುದ್ದೆ:
3. ವೇತನ ಶ್ರೇಣಿ ಮತ್ತು ಈಗಿನ ವೇತನ:

| ಕ್ರಮ ಸಂ. | ಬ್ಯಾಂಕುಗಳು/ಅಂಚೆ ಕಛೇರಿಯಲ್ಲಿ ಹೊಂದಿರುವ ಖಾತೆಗಳು/ಸ್ಟಾಕುಗಳು/ಷೇರುಗಳು/ಡಿಬೆಂಚರುಗಳು ಸೇರಿದಂತೆ ಚರಾಸ್ತಿಗಳ ವಿವರಗಳು | ಚರಾಸ್ತಿಯ ಮೌಲ್ಯ | ಖರೀದಿ/ ವಿಲೇವಾರಿಯ ದಿನಾಂಕ: | ಅಂಕಣ ಸಂ. 2 ರಲ್ಲಿ ಹೇಳಿರುವ ಚರಾಸ್ತಿಯನ್ನು ಖರೀದಿಸುವುದಕ್ಕೆ ಇದ್ದ ಆದಾಯದ ಮೂಲಗಳು | ಆಸ್ತಿಯನ್ನು ಅರ್ಜಿಸಿದ ಬಗ್ಗೆ ನಿಗಮಕ್ಕೆ ವರದಿ ಸಲ್ಲಿಸಿದ ದಿನಾಂಕ | ಷರಾ |
|---|---|---|---|---|---|---|
| 1 | 2 | 3 | 4 | 5 | 6 | 7 |
| | | | | | | |

ಸಹಿ :

ಪದನಾಮ :